**MARCH 5,2025**
**ALL INDIA RADIO- DHARWAD**
**PRADESH SAMACHARA (KANNADA) 12PM**

<><><>

**ಆಹಾರ ಪದಾರ್ಥಗಳ ಸುರಕ್ಷತೆಗೆ ರಾಜ್ಯ ಸರ್ಕಾರ ಎಲ್ಲ ಅಗತ್ಯ ಕ್ರಮಗಳನ್ನು** ತೆಗೆದುಕೊಳ್ಳುತ್ತಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಖಾತೆ ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ. ಪ್ರತಿ ತಿಂಗಳು ಒಂದೊಂದು ಆಹಾರ ಪದಾರ್ಥಗಳನ್ನು ಗುಣಮಟ್ಟ ಪರೀಕ್ಷೆಗೆ ಒಳಪಡಿಸಲಾಗುತ್ತದೆ. ಕಲಬೆರೆಕೆಯಾಗಿರುವ ಆಹಾರ ಪದಾರ್ಥ, ಅದರ ಕುರಿತು ತೆಗೆದುಕೊಂಡ ಕ್ರಮಗಳು ಎಲ್ಲದರ ಕುರಿತು ಸಾರ್ವಜನರಿಗೆ ಮಾಹಿತಿ ನೀಡಿ, ಜಾಗೃತಿ ಮೂಡಿಸಲಾಗುತ್ತಿದೆ ಎಂದು ಸಾಮಾಜಿಕ ಮಾಧ್ಯಮ ಎಕ್ಸ್ ಮೂಲಕ ತಿಳಿಸಿದ್ದಾರೆ.

<><><>

**ಕರ್ನಾಟಕ ಜಾನಪದ ಅಕಾದೆಮಿ 2024** ನೇ ಸಾಲಿನ, ಗೌರವ ಪ್ರಶಸ್ತಿ ಹಾಗೂ ತಜ್ಞ ಪ್ರಶಸ್ತಿಗಳನ್ನು ಪ್ರಕಟಿಸಿದೆ. ಜಾನಪದ ಸಂಗೀತ ವಿಭಾಗದ ಗೌರವ ಪ್ರಶಸ್ತಿಗೆ ಧಾರವಾಡ ಜಿಲ್ಲೆ ಇಟಿಗಟ್ಟಿ ಗ್ರಾಮದ ಜಾನಪದ ಕಲಾವಿದ ಪ್ರಭು ಬಸಪ್ಪ ಕುಂದರಗಿ ಅವರು ಭಾಜನರಾಗಿದ್ದರೆ. ಪ್ರದೇಶ ಸಮಾಚಾರದೊಂದಿಗೆ ಅವರು ತಮ್ಮ ಸಂತಸವನ್ನು ಹಂಚಿಕೊಂಡಿದ್ದಾರೆ.

<><><>

**ಇಂದು ಪದ್ಮವಿಭೂಷಣ, ಹಿಂದೂಸ್ಥಾನಿ ಸಂಗೀತ** ಸಾಮ್ರಾಜ್ಞಿ ಡಾಕ್ಟರ್ ಗಂಗೂಬಾಯಿ ಹಾನಗಲ್ ಅವರ ಜನ್ಮವಾರ್ಷಿಕ ದಿನ. ಈ ದಿನಂದು ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಸೇರಿದಂತೆ ನಾಡಿನ ಗಣ್ಯರು ಗಂಗೂಬಾಯಿ ಹಾನಗಲ್ ಅವರ ಸಂಗೀತ ಸೇವೆಯನ್ನು ಸ್ಮರಿಸಿಕೊಂಡಿದ್ದಾರೆ. ಕೇಂದ್ರ ನವ ಹಾಗೂ ನವೀಕರಿಸಬಹುದಾದ ಇಂಧನಗಳ ಖಾತೆ ಸಚಿವ ಪ್ರಲ್ಹಾದ್ ಜೋಶಿಯವರು ತಮ್ಮ ಎಕ್ಸ್ ಖಾತೆಯಲ್ಲಿ, ಹುಬ್ಬಳ್ಳಿ–ಧಾರವಾಡ 'ಸಂಗೀತ ಕಾಶಿ' ಎಂದು ಹೆಸರುವಾಸಿಯಾಗಲು ಅಮೂಲ್ಯ ಕೊಡುಗೆ ನೀಡಿದವರು ಡಾಕ್ಟರ್ ಗಂಗೂಬಾಯಿ ಹಾನಗಲ್, ಅವರ ಜನ್ಮದಿನದಂದು ಗೌರವ ಪೂರ್ಣ ನಮನಗಳು ಎಂದಿದ್ದಾರೆ.

<><><>

**ಪ್ರವಾಸೋದ್ಯಮಕ್ಕೆ ಹೆಸರುವಾಸಿಯಾದ** ಕರಾವಳಿ ಕರ್ನಾಟಕವನ್ನು ಗುಣಮಟ್ಟದ ತಾಣವಾಗಿ, ಸುಸ್ಥಿರವಾಗಿ ಅಭಿವೃದ್ಧಿಪಡಿಸಲು ಪ್ರಯತ್ನಗಳನ್ನು ಮಾಡಲಾಗುತ್ತಿದೆ. 320 ಕಿಲೋ ಮೀಟರ ಉದ್ದದ ರಾಜ್ಯ ಕರಾವಳಿಯ ಪ್ರವಾಸೋದ್ಯಮ ಅಭಿವೃದ್ಧಿಗೆ, ಹೆಚ್ಚಿನ ಒತ್ತು ನೀಡಲು ವಿಶೇಷ ಹಣಕಾಸು ಪ್ಯಾಕೇಜುಗಳನ್ನು ಸೃಜಿಸಲಾಗುವುದು ಎಂದು ಪ್ರವಾಸೋದ್ಯಮ ಖಾತೆ ಸಚಿವ ಎಚ್.ಕೆ ಪಾಟೀಲ್ ವಿಧಾನಸಭೆಯಲ್ಲಿ ಹೇಳಿದರು. ಬೈಂದೂರು ಶಾಸಕ ಗುರುರಾಜ್ ಶೆಟ್ಟಿ ಅವರ ಪ್ರಶ್ನೆಗೆ ಅಧಿವೇಶನದಲ್ಲಿ ಉತ್ತರಿಸಿದ ಸಚಿವರು,  ಕರಾವಳಿ ಕರ್ನಾಟಕವು 2023ರಲ್ಲಿ 8 ಕೋಟಿಗೂ ಹೆಚ್ಚು ಪ್ರವಾಸಿಗರನ್ನು ಕಂಡಿದೆ. ರಾಜ್ಯದ ಒಟ್ಟು ಪ್ರವಾಸಿಗರ ಸಂಖ್ಯೆಯಲ್ಲಿ ಕರಾವಳಿ ಕರ್ನಾಟಕಕ್ಕೆ, ಭೇಟಿ ನೀಡುವ ಪ್ರವಾಸಿಗರ ಸಂಖ್ಯೆ ಶೇಕಡ 12 ರಿಂದ 15ರಷ್ಟಿದೆ. ಕರಾವಳಿ ಪ್ರವಾಸೋದ್ಯಮವನ್ನು ಅಭಿವೃದ್ಧಿಪಡಿಸಲು ಅಪಾರ ಅವಕಾಶ ಹಾಗೂ ಸಾಮರ್ಥ್ಯವಿದೆ ಎಂದರು.

<><><>

**ಚಿಕ್ಕಬಳ್ಳಾಪುರ ತಾಲ್ಲೂಕಿನ ವರದಹಳ್ಳಿಯಲ್ಲಿ ಹಕ್ಕಿಜ್ವರ ಪತ್ತೆಯಾದ ಹಿನ್ನೆಲೆಯಲ್ಲಿ** ಜಿಲ್ಲಾಡಳಿತ ಕೂಡಲೇ ರೋಗ ನಿಯಂತ್ರಣಕ್ಕೆ ಸಮರೋಪಾದಿಯಲ್ಲಿ ಕ್ರಮಗಳನ್ನು ಕೈಗೊಂಡ ಪರಿಣಾಮ, ಹಕ್ಕಿಜ್ವರ ನಿಯಂತ್ರಣಕ್ಕೆ ಬಂದಿದೆ. ಹಕ್ಕಿಜ್ವರ ಗ್ರಾಮದಿಂದ ಹೊರಗಡೆ ಹರಡದಂತೆ ಕಟ್ಟೆಚ್ಚರ ವಹಿಸಲಾಗಿದೆ ಎಂದು ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ತಿಳಿಸಿದ್ದಾರೆ.

<><><>

**ರಾಜ್ಯದ ಬಳ್ಳಾರಿ ಹಾಗೂ** ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಹಕ್ಕಿಜ್ವರ ಕಾಣಿಸಿಕೊಂಡಿರುವ ಹಿನ್ನೆಲೆಯಲ್ಲಿ ಶಿವಮೊಗ್ಗ ಜಿಲ್ಲೆಯಲ್ಲೂ ಮುಂಜಾಗ್ರತಾ ಕ್ರಮ ಕೈಗೊಳ್ಳಲಾಗಿದ್ದು, ಸಾರ್ವಜನಿಕರು ಯಾವುದೇ ಆತಂಕಕ್ಕೆ ಒಳಾಗಬಾರದು ಎಂದು ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ಆಡಳಿತ ಉಪ ನಿರ್ದೇಶಕ ಡಾಕ್ಟರ್ ಎ.ಬಾಬುರತ್ನ ತಿಳಿಸಿದ್ದಾರೆ.

<><><>

**ಹಾಸನ ಜಿಲ್ಲೆಯಲ್ಲಿ ಹಕ್ಕಿಜ್ವರ** ಪ್ರಕರಣಗಳು ಕಂಡು ಬಂದಿಲ್ಲ, ಜನರು ಆತಂಕ ಪಡುವ ಅಗತ್ಯವಿಲ್ಲ, ಆದರೆ ಸಾರ್ವಜನಿಕ ಹಿತದೃಷ್ಟಿಯಿಂದ ಅಗತ್ಯ ಮುಂಜಾಗ್ರತಾ ಕ್ರಮವನ್ನು ವಹಿಸಬೇಕು ಎಂದು ಜಿಲ್ಲಾಧಿಕಾರಿ ಸತ್ಯಭಾಮ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

<><><>

**ರಾಮನಗರ ಜಿಲ್ಲೆಯ ಪ್ರತಿ ಆರೋಗ್ಯ** ಕೇಂದ್ರಗಳಲ್ಲಿಯೂ ಹೆಚ್.ಐ.ವಿ ಪತ್ತೆ ಪರೀಕ್ಷೆ ಸೌಲಭ್ಯ ಕಲ್ಪಿಸಲಾಗಿದೆ, ಆರಂಭಿಕ ಹಂತದಲ್ಲಿ ಹೆಚ್.ಐ.ವಿ ಪರೀಕ್ಷೆ ಮಾಡಿಸಿದಲ್ಲಿ, ರೋಗದಿಂದ ಮುಕ್ತಿ ಪಡೆಯಬಹುದಾಗಿದೆ ಎಂದು ಜಿಲ್ಲಾಧಿಕಾರಿ ಯಶವಂತ್ ವಿ. ಗುರುಕರ ಹೇಳಿದರು. ಜಿಲ್ಲಾ ಮಟ್ಟದ ಲಸಿಕಾ ಕಾರ್ಯಪಡೆ ಸಮಿತಿ ಸಭೆಯಲ್ಲಿ ಅವರು ಈ ಮಾಹಿತಿ ನೀಡಿದರು. ಜಿಲ್ಲೆಯಲ್ಲಿ ಈ ತನಕ 3 ಸಾವಿರದ 980 ಜನರಲ್ಲಿ ಹೆಚ್.ಐ.ವಿ ಸೋಂಕಿರುವುದನ್ನು ದೃಢಪಡಿಸಲಾಗಿದೆ ಎಂದರು. ಜಿಲ್ಲೆಯನ್ನು ದಡಾರ ಮುಕ್ತಗೊಳಿಸುವಲ್ಲಿ ಕ್ರಮ ಕೈಗೊಳ್ಳಲಾಗಿದೆ ಎಂದರು.

<><><>

**ಮಂಡ್ಯ ಜಿಲ್ಲೆ ಪಾಂಡವಪುರ ತಾಲೂಕಿನ,** ಮೇಲುಕೋಟೆಯ, ಶ್ರೀ ಚಲುವನಾರಾಯಣಸ್ವಾಮಿಯ ವೈರಮುಡಿ ಉತ್ಸವ ಏಪ್ರಿಲ್ 7ರಂದು ನಡೆಯಲಿದೆ. ಭಕ್ತಾದಿಗಳಿಗೆ ಅಗತ್ಯವಾದ ಮೂಲಸೌಕರ್ಯ ಹಾಗೂ ಸಿದ್ಧತೆಗಳನ್ನು ಮಾಡಿಕೊಳ್ಳುವಂತೆ ಜಿಲ್ಲಾಧಿಕಾರಿ ಡಾಕ್ಟರ್ ಕುಮಾರ ಅಧಿಕಾರಿಗೆ ಸೂಚಿಸಿದ್ದಾರೆ. 19 ಲಕ್ಷ ರೂಪಾಯಿ ವೆಚ್ಚದಲ್ಲಿ ದೇವಸ್ಥಾನದ ಸುತ್ತಲೂ ಸಿ.ಸಿ ಟಿವಿ ಅಳವಡಿಕೆಗೆ ಯೋಜನೆ ರೂಪಿಸಲಾಗಿದೆ.

<><><>